ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಬ್ಯಾಕ್‌ಲಾಗ್ ಪ್ರಾಂಶುಪಾಲರ ನೇಮಕಾತಿ

21 (506) ಶ್ರೀ ಗಡ್ಡದೇವರಮರ ಗದ್ದಯ್ಯ ಶಿವಮೂರ್ತಯ್ಯ (ಶಿರಹಟ್ಟಿ) ಮಾನ್ಯ ಉನ್ನತ ಶಿಕ್ಷಣ ಮತ್ತು ವಾರ್ತಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬ್ಯಾಕ್‌ಲಾಗ್ ಪ್ರಾಂಶುಪಾಲರ ಹುದ್ದೆಗಳ ನೇಮಕಾತಿಯು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ನಡೆದಿದೆಯೇ

ಆ) ಎಷ್ಟು ಕಾಲೇಜುಗಳಲ್ಲಿ ನಡೆದಿದೆ ಕಳೆದ ಮೂರು ವರ್ಷಗಳ ವಿವರ ನೀಡುವುದು

ಇ) ಬ್ಯಾಕ್‌ಲಾಗ್ ಪ್ರಾಂಶುಪಾಲರ ಹುದ್ದೆಗಳನ್ನು ತುಂಬಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳು ಯಾವುವು?

ಡಾ ಜಿ ಪರಮೇಶ್ವರ್ (ಉನ್ನತ ಶಿಕ್ಷಣ ಮತ್ತು ವಾರ್ತಾ ಸಚಿವರು)

ಅ) ಮೀಸಲಾತಿ ಮತ್ತು ಬ್ಯಾಕ್‌ಲಾಗ್ ತುಂಬುವಿಕೆಯನ್ನು ಪ್ರಾಂಶುಪಾಲರು ಗ್ರೇಡ್–1 ಹುದ್ದೆಗಳ ತುಂಬುವಿಕೆಗೆ ಅನ್ವಯಿಸಲಾಗುತ್ತಿದೆ ಮಂಡಳಿಯು ದಿನಾಂಕ 13 12 2002ರ ಯಥಾಸ್ಥಿತಿ ಕಾಯ್ದುಕೊಳ್ಳಬೇಕೆಂಬ ಆದೇಶದಿಂದಾಗಿ ಪದೋನ್ನತಿಗಳು ಆಗಿರುವುದಿಲ್ಲ

ಆ) ಯಾವುದೂ ಇಲ್ಲ

ಇ) ಪದೋನ್ನತಿಗಳನ್ನು ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮಾಡಬೇಕಾಗಿದೆ

ನಾಗಮಂಗಲ ತಾಲ್ಲೂಕು ಸರ್ಕಾರಿ ಆಸ್ಪತ್ರೆಗೆ ಸಿಬ್ಬಂದಿ

23 (117) ಶ್ರೀ ಚೆಲುವರಾಯ ಸ್ವಾಮಿ ಎನ್ (ನಾಗಮಂಗಲ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ನಾಗಮಂಗಲ ತಾಲ್ಲೂಕು ಸರ್ಕಾರಿ ಆಸ್ಪತ್ರೆಗೆ ಮಂಜೂರಾದ ಹಾಗೂ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಎಷ್ಟು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದರೆ ಭರ್ತಿ ಮಾಡಲು ಕ್ರಮವೇನು

ಆ) ರಾಜ್ಯದಲ್ಲಿ ಹಿರಿಯ ಹಾಗೂ ಕಿರಿಯ ಸಹಾಯಕರು ಹಾಗೂ ಇತರೆ ಸಿಬ್ಬಂದಿವರ್ಗದವರ ನೇಮಕಾತಿ ಪ್ರಕ್ರಿಯೆ ಅಂತಿಮ ಹಂತ ತಲುಪಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ಯಾವಾಗ ನೇಮಕಾತಿ ಆದೇಶ ನೀಡಲಾಗುವುದು

ಇ) ನಾಗಮಂಗಲ ಸರ್ಕಾರಿ ಆಸ್ಪತ್ರೆಯಲ್ಲಿ ಎಕ್ಸ್‌ರೇ ಹಾಗೂ ರಕ್ತ ಪರೀಕ್ಷೆಗೆ ಉಪಕರಣಗಳು ಇದ್ದು ಎಕ್ಸ್‌ರೇ ಟೆಕ್ನೀಷಿಯನ್ ಹಾಗೂ ಲ್ಯಾಬ್ ಟೆಕ್ನೀಷಿಯನ್‌ಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಇದರ ಬಗ್ಗೆ ಕ್ರಮವೇನು

ಈ) ನಾಗಮಂಗಲ ತಾಲ್ಲೂಕಿನ ಕಾಳಿಂಗನಹಳ್ಳಿ ಹಾಗೂ ಹೊನ್ನಾವರ ಗ್ರಾಮಪಂಚಾಯಿತಿ ಕೇಂದ್ರಗಳಾಗಿದ್ದು, ಈ ಪಂಚಾಯಿತಿ ವ್ಯಾಪ್ತಿಗೆ ಸೇರುವ ಸಾರ್ವಜನಿಕರಿಗೆ ಆರೋಗ್ಯ ಚಿಕಿತ್ಸೆಗೆ ತುಂಬಾ ತೊಂದರೆಯಾಗಿರುವುದರಿಂದ ಈ ಗ್ರಾಮಪಂಚಾಯತಿಗಳ ಕೇಂದ್ರ ಸ್ಥಾನದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ತೆರೆಯಲು ಇಲಾಖೆಯ ಮುಂದೆ ಪ್ರಸ್ತಾವನೆ ಇದೆಯೇ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ನಾಗಮಂಗಲ ತಾಲ್ಲೂಕು ಸರ್ಕಾರಿ ಆಸ್ಪತ್ರೆಗೆ 39 ಹುದ್ದೆಗಳು ಮಂಜೂರಾಗಿರುತ್ತದೆ 31 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ 8 ಹುದ್ದೆಗಳು ಕೊರತೆ ಇರುತ್ತದೆ